ಕರ್ನಾಟಕಸರ್ಕಾರ

(ಕಂದಾಯ ಇಲಾಖೆ)

ಉಪತಹಶೀಲ್ದಾರವರ ನ್ಯಾಯಾಲಯ ನಾಡಕಛೇರಿ ಹೊಸಹಳ್ಳಿ

ಸಂ/ಕಂ/ಹ.ಬ./ನಾಕಹೊ/29/2016-17. ದಿನಾಂಕ:26-09-2016.

| ವಾದಿಗಳು | ಪ್ರತಿವಾದಿಗಳು |
|---|---|
| ಸಣ್ಣ ಓಬಯ್ಯ ತಾಯಿ ಲೇಟ್ ಲಕ್ಷ್ಮಮ್ಮ<br>ಸೂಲದಹಳ್ಳಿ ಗ್ರಾಮ<br>ಕೂಡ್ಲಿಗಿ ತಾಲೂಕು | ಕಂದಾಯ ಪರಿವೀಕ್ಷಕರು<br>ಹೊಸಹಳ್ಳಿ |
| ಕೂಡ್ಲಿಗಿ ತಾಲೂಕು ಸೂಲದಹಳ್ಳಿ ಗ್ರಾಮದ ಸನಂ 227. ವಿಸ್ತೀರ್ಣ 9-25. ಎಕ್ರೆ ಜಮೀನನ್ನು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡುವ ಬಗ್ಗೆ. | |

ಪ್ರಸ್ತಾವನೆ:

ಕೂಡ್ಲಿಗಿ ತಾಲೂಕು ಸೂಲದಹಳ್ಳಿ ಗ್ರಾಮದ ಸನಂ 227. ವಿಸ್ತೀರ್ಣ 9-25. ಎಕ್ರೆ ಜಮೀನನ್ನು ಸದರಿ ಗ್ರಾಮದ ಸಣ್ಣ ಓಬಯ್ಯ ತಾಯಿ ಲೇಟ್ ಲಕ್ಷ್ಮಮ್ಮ ಇವರು ಪೋತಿವಾರಸು ಪ್ರಕಾರ ಹಕ್ಕು ಬದಲಾವಣೆ ಮಾಡಲು ಕೋರಿ ಅರ್ಜಿ ಸಲ್ಲಿಸಿರುತ್ತಾರೆ. ಈ ಬಗ್ಗೆ ಗ್ರಾಮಲೆಕ್ಕಿಗರು ಸೂಲದಹಳ್ಳಿ ಇವರು ನಮೂನೆ-21 ನೋಟಿಸನ್ನು ದಿನಾಂಕ 02-11-2015 ರಂದು ಗ್ರಾಮದಲ್ಲಿ ಪ್ರಚೂರು ಪಡಿಸಿ ಹಾಗೂ ಸಂಬಂಧಪಟ್ಟವರಿಗೆ ಜಾರಿ ಮಾಡಲಾಗಿ ಮರಣ ಪ್ರಮಾಣ ಪತ್ರ ದೃಡಿಕರಿಸಿ ಲಗತ್ತಿಸಿಲ್ಲದ ಕಾರಣ ಹಾಗೂ ಹಳೇ ಪಹಣಿ ಲಗತ್ತಿಸಿಲ್ಲ ಕಾರಣ ಈ ಪ್ರಕರಣದ ಎಂ.ಆರ್.ನಂಬರ್: 21/2015-16. ದಿನಾಂಕ 02-12-2015. ರಲ್ಲಿ ಗೈರು ಮಂಜೂರು ಮಾಡಿ ಮುಂದಿನ ಕ್ರಮಕ್ಕೆ ಈ ಕಾರ್ಯಾಲಯಕ್ಕೆ ಕಳುಹಿಸಿ ಕೊಟ್ಟಿರುತ್ತಾರೆ.

ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ವಿಚಾರಣೆ ಮಾಡುವ ದಿಸೆಯಲ್ಲಿ ಉಭಯ ಪಕ್ಷದವರಿಗೂ ನೋಟಿಸ್ಸು ನೀಡಿ ದಿನಾಂಕ 26-09-2016 ರಂದು ವಿಚಾರಣೆ ಮಾಡಲಾಯಿತು.

ವಿಚಾರಣೆ ಸಮಯದಲ್ಲಿ ಅರ್ಜಿದಾರರು ಹಾಜರಾಗಿರುತ್ತಾರೆ. ಅರ್ಜಿದಾರರು ಸೂಲದಹಳ್ಳಿ ಗ್ರಾಮದ ಸನಂ 227. ವಿಸ್ತೀರ್ಣ 9-25. ಎಕ್ರೆ ಜಮೀನು ನಮ್ಮ ಅಜ್ಜನವರಾದ ಓಬಳದೇವರ ಪೂಜಾರಿ ಓಬಯ್ಯ ತಂದೆ ಕುಂಟಯ್ಯ ಇವರ ಹೆಸರಲ್ಲಿ ಲೆಕ್ಕ ದಾಖಲೆ ಪಟ್ಟಾ ಇದ್ದು ಇವರು ದಿನಾಂಕ 20-12-2013 ರಂದು ನಿಧನ ಹೊಂದಿರುತ್ತಾರೆ. ಕಾರಣ ಪೋತಿವಾರಸು ಹಕ್ಕಿನ ಪ್ರಕಾರ ನನ್ನ ಹೆಸರಲ್ಲಿ ಹಕ್ಕು ಬದಲಾವಣೆ ಮಾಡಬೇಕೆಂದು ಕೋರಿರುತ್ತಾರೆ.

ಮೇಲಿನ ಎಲ್ಲಾ ಅಂಶಗಳನ್ನು ಗಣನೆಗೆ ತೆಗೆದು ಕೊಂಡು ಸದರಿ ವಿವಾದಿತ ಜಮೀನಿನ ಕಂದಾಯ ಲೆಕ್ಕಗಳನ್ನು ಪರಿಶೀಲಿಸಿ ಅರ್ಜಿದಾರರ ಹೇಳಿಕೆಗಳನ್ನು ಕೇಳಿ ಮರಣ ಪ್ರಮಾಣ ಪತ್ರದಲ್ಲಿ ನಮೂದಿಸಿದ ದಿನಾಂಕ ಖಾತೆದಾರರು ಮರಣ ಹೊಂದಿದ ದಿನಾಂಕ ತಪ್ಪಾಗಿದ್ದು ಅದನ್ನು ಸರಿಪಡಿಸುವುದು ಅಗತ್ಯವಿದ್ದು ಮೂಲ ಖಾತೆದಾರರು ಮರಣ ಹೊಂದಿದ ದಿನಾಂಕದಿಂದ ಅದಕ್ಕೆ ಪೂರ್ವದಲ್ಲಿದೆಯೇಂದು ತಿಳಿಸಿದ್ದರಿಂದ ಅರ್ಜಿದಾರರರ ಕೋರಿಕೆಯನ್ನು ತಿರಸ್ಕರಿಸುತ್ತಾ ಈ ಕೆಳಗಿನಂತೆ ಆದೇಶ ಮಡಲಾಗಿದೆ.

ಪು.ತಿ.ನೋ-2

## -:ಆದೇಶ:-

ಮೇಲೆ ವಿವರಿಸಿದ ಸಂದರ್ಭ ವಾಸ್ತುವಾಂಶ ಮತ್ತು ಕಾರಣಗಳಿಂದ ಕೂಡ್ಲಿಗಿ ತಾಲೂಕು ಸೂಲದಹಳ್ಳಿ ಗ್ರಾಮದ ಸನಂ 227. ವಿಸ್ತೀರ್ಣ 9-25. ಎಕ್ರೆ ಜಮೀನು ಮೂಲ ಪಟ್ಟದಾರರು ಮರಣ ಹೊಂದಿದ ದಿನಾಂಕವನ್ನು ತಪ್ಪಾಗಿ ನಮೂದಿಸಿ ಅರ್ಜಿ ಸಲ್ಲಿಸಿರುವುದು ಕಂಡು ಬಂದಿರುವ ಕಾರಣ ಅರ್ಜಿದಾರರ ಕೋರಿಕೆಯನ್ನು ತಿರಸ್ಕರಿಸುತ್ತಾ ಪಹಣಿಯನ್ನು ಯಥಾಸ್ಥಿತಿಯಂತೆ ಮುಂದುವರೆಸಲು ಆದೇಶಿಸಿ ಈ ಪ್ರಕರಣವನ್ನು ಈ ಕಾರ್ಯಾಲಯದಲ್ಲಿ ಈ ಹಂತದಲ್ಲಿ ಮುಕ್ತಾಯಗೊಳಿಸಲು ಆದೇಶಿಸಲಾಗಿದೆ.

ಈ ಆದೇಶವನ್ನು ಹೇಳಿ ಬರೆಯಿಸಿ ಬೆರಳಚ್ಚು ಮಾಡಿಸಿ ತಪ್ಪುಗಳನ್ನು ತಿದ್ದಿ ದಿನಾಂಕ 26-09-2016 ರಂದು ತೆರೆದ ನ್ಯಾಯಾಲಯದಲ್ಲಿ ಘೋಷಿಸಲಾಯಿತು.

ಉಪತಹಶೀಲ್ದಾರರು
ನಾಡಕಛೇರಿ ಹೊಸಹಳ್ಳಿ

ಇದರ ಪ್ರತಿಯನ್ನು:

1) ಅರ್ಜಿದಾರರಾದ ಸಣ್ಣ ಓಬಯ್ಯ ತಾಯಿ [illegible] ಲಕ್ಷ್ಮಮ್ಮ ಸೂಲದಹಳ್ಳಿ ಗ್ರಾಮ ಕೂಡ್ಲಿಗಿ ತಾಲೂಕು ಇವರಿಗೆ ಕಳುಹಿಸಿ ಕೊಡಲಾಗಿದೆ.
2) ಕಂದಾಯ ಪರಿವೀಕ್ಷಕರು ಹೊಸಹಳ್ಳಿ ಇವರ ಮಾಹಿತಿಗಾಗಿ ಕಳುಹಿಸಿ ಕೊಡಲಾಗಿದೆ.
3) ಗಣಕೀಕರಣ ವಿಭಾಗ ತಾಲೂಕು ಕಛೇರಿ ಕೂಡ್ಲಿಗಿ ಇವರ ಮುಂದಿನ ಕ್ರಮಕ್ಕಾಗಿ ಕಳುಹಿಸಿ ಕೊಡಲಾಗಿದೆ.
4) ಅಪೀಲು ಅವಧಿ 60 ದಿವಸ ಇರುತ್ತದೆ.